Akashvani: Bangalore
National Bulletin In Kannada
24.04.2026: 7.35AM
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

24.04.2026: 7.35AM

********

**ಮುಖ್ಯಾಂಶಗಳು :**

1. ಪಶ್ಚಿಮ ಬಂಗಾಳದಲ್ಲಿ ನಡೆದ ಮೊದಲ ಹಂತದ ವಿಧಾನಸಭಾ ಚುನಾವಣೆ ಶೇಕಡ ೯೧.೭೮ರಷ್ಟು ಮತದಾನ; ತಮಿಳುನಾಡಿನಲ್ಲಿ ಶೇಕಡ ೮೪.೬೯ ರಷ್ಟು ದಾಖಲೆಯ ಮತದಾನ
2. ಇಂದು ದೇಶಾದ್ಯಂತ ಪಂಚಾಯತ್ ರಾಜ್ ದಿನ; ನವದೆಹಲಿಯಲ್ಲಿ ಪ್ರಧಾನ ಕಾರ್ಯಕ್ರಮ ಆಯೋಜನೆ
3. ಉತ್ತರ ಪ್ರದೇಶದ ಲಖನೌನಲ್ಲಿ ಕೃಷಿ ಸಮ್ಮೇಳನ; ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭಾಗಿ
4. ಭಾರತೀಯ ನಾಗರಿಕರು ಯಾವುದೇ ಮಾರ್ಗಗಳ ಮೂಲಕ ಇರಾನ್‌ಗೆ ಪ್ರಯಾಣಿಸದಂತೆ ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಸಲಹೆ
5. ಐಪಿಎಲ್ ಟಿ-೨೦ ಕ್ರಿಕೆಟ್; ಮುಂಬೈ ಇಂಡಿಯನ್ಸ್ ತಂಡದ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್‌ಗೆ ಭರ್ಜರಿ ಜಯ

********

ಪಶ್ಚಿಮ ಬಂಗಾಳದಲ್ಲಿ ನಡೆದ ಮೊದಲ ಹಂತದ ವಿಧಾನಸಭಾ ಚುನಾವಣೆಯಲ್ಲಿ ಅತಿ ಹೆಚ್ಚು ಶೇಕಡ ೯೧.೭೮ರಷ್ಟುಮತದಾನವಾಗಿದೆ. ತಮಿಳುನಾಡಿನಲ್ಲಿಯೂ ಸಹ ನಿನ್ನೆ ಶೇಕಡ ೮೪.೬೯ ರಷ್ಟು ದಾಖಲೆಯ ಮತದಾನವಾಗಿದೆ. ಪಶ್ಚಿಮ ಬಂಗಾಳದಲ್ಲಿ, ಸುಮಾರು ಶೇಕಡ ೯೧ ರಷ್ಟು ಪುರುಷರು, ಶೇಕಡ ೯೨ರಷ್ಟಕ್ಕಿಂತ ಹೆಚ್ಚು ಮಹಿಳೆಯರು ಮತ್ತು ಶೇಕಡ ೫೭ರಷ್ಟು ತೃತೀಯ ಲಿಂಗಿಗಳು ತಮ್ಮ ಮತದಾನದ ಹಕ್ಕನ್ನು ಚಲಾಯಿಸಿದ್ದಾರೆ. ತಮಿಳುನಾಡಿನಲ್ಲಿ ಶೇಕಡ ೮೩ಕ್ಕಿಂತ ಹೆಚ್ಚು ಪುರುಷರು, ಶೇಕಡ ೮೬ಕ್ಕಿಂತ ಹೆಚ್ಚು ಮಹಿಳೆಯರು ಮತ್ತು ಶೇಕಡ ೬೦ಕ್ಕಿಂತ ಹೆಚ್ಚು ಮಹಿಳೆಯರು ತಮ್ಮ ಮತದಾನದ ಹಕ್ಕನ್ನು ಚಲಾಯಿಸಿದ್ದಾರೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಚುನಾವಣಾ ಆಯುಕ್ತ ಡಾ. ಎಸ್.ಎಸ್. ಸಂಧು ಮತ್ತು ಡಾ. ವಿವೇಕ್ ಜೋಶಿ ಎರಡೂ ರಾಜ್ಯಗಳ ಎಲ್ಲಾ ಮತಗಟ್ಟೆಗಳಲ್ಲಿ ನೇರ ವೆಬ್‌ಕಾಸ್ಟಿಂಗ್ ಮೂಲಕ ಮತದಾನದ ಮೇಲೆ ನಿಗಾ ವಹಿಸಿದ್ದರು.

********

ಎರಡನೇ ಹಂತದಲ್ಲಿ ಮತದಾನ ನಡೆಯಲಿರುವ ಪಶ್ಚಿಮ ಬಂಗಾಳದ ವಿಧಾನಸಭಾ ಕ್ಷೇತ್ರಗಳಲ್ಲಿ ವಿವಿಧ ರಾಜಕೀಯ ಪಕ್ಷಗಳಿಂದ ಭರದ ಚುನಾವಣಾ ಪ್ರಚಾರ ನಡೆದಿದೆ. ಹಿರಿಯ ಬಿಜೆಪಿ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರು, ಕೃಷ್ಣ ನಗರದಲ್ಲಿ ನಿನ್ನೆ ಚುನಾವಣಾ ರ‍್ಯಾಲಿ ಉದ್ದೇಶಿಸಿ ಮಾತನಾಡಿ, ರಾಜ್ಯದಲ್ಲಿ ರಾಜಕೀಯ ಬದಲಾವಣೆ ಅನಿವಾರ್ಯವಾಗಿದೆ ಎಂದರು. ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ಸರ್ಕಾರ ಅಕ್ರಮ ನುಸುಳುಕೋರರನ್ನು ಪ್ರೋತ್ಸಾಹಿಸುತ್ತಿದೆ; ಸುಳ್ಳು ದಾಖಲೆಗಳನ್ನು ಒದಗಿಸುವ ಮೂಲಕ ಈ ನುಸುಳುಕೋರರಿಗೆ ಆಶ್ರಯ ನೀಡುತ್ತಿದೆ ಎಂದು ಆಪಾದಿಸಿದರು. ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ ಅನುಮೋದನೆಗೆ ತೃಣಮೂಲ ಕಾಂಗ್ರೆಸ್ ತಡೆಯೊಡ್ಡಿದೆ ಎಂದು ಪ್ರಧಾನಿ ಅವರು ಟೀಕಿಸಿದರು. ರಾಜ್ಯದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಅಸ್ತಿತ್ವಕ್ಕೆ ಬಂದರೆ, ಪೌರತ್ವ ತಿದ್ದುಪಡಿ ಕಾಯ್ದೆ ಅನ್ವಯ ಪೌರತ್ವ ನೀಡುವ ಪ್ರಕ್ರಿಯೆಯನ್ನು ತ್ವರಿತಗೊಳಿಸಲಾಗುವುದು ಎಂದರು. ನಂತರ ಪ್ರಧಾನಿ ಅವರು, ಮಾತುರ್‌ಪುರದಲ್ಲಿ ಚುನಾವಣಾ ಪ್ರಚಾರ ಸಭೆ ಹಾಗೂ ಹೌರಾದಲ್ಲಿ ರೋಡ್ ಶೋ ನಡೆಸಿದರು. ಮತ್ತೊಬ್ಬ ಬಿಜೆಪಿ ನಾಯಕ ಅಮಿತ್ ಶಾ, ಹೂಗ್ಲಿಯಲ್ಲಿ ಬಾಲಾಗರ್ ಪರ್ಸುರಾಹಗಳಲ್ಲಿ ಸಾರ್ವಜನಿಕ ಸಭೆ ನಡೆಸಿದರು. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನವಿನ್ ನೇತೃತ್ವದಲ್ಲಿ ಖರ್ದ್ ಮತ್ತು ಕಾಶಿಯಾಪುರ-ಬೆಲಗಾಚಿಯದಲ್ಲಿ ರೋಡ್ ಶೋ ನಡೆಯಿತು. ಈ ಮಧ್ಯೆ, ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಚೌರಂಗಿ ಮತ್ತು ಜಾಧವ್‌ಪುರಗಳಲ್ಲಿ ಪಕ್ಷದ ಪರ ಚುನಾವಣಾ ಪ್ರಚಾರ ನಡೆಸಿದರು. ಭವಾನಿಪುರದಲ್ಲಿ ರ‍್ಯಾಲಿ ನಡೆಸಲಿದ್ದಾರೆ. ತೃಣಮೂಲ ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಮೆಟಿಯಾಬ್ರುಜ್‌ನಲ್ಲಿ ಮತಯಾಚಿಸಿದರು. ಸಿಪಿಐಎಂ ರಾಜ್ಯ ಕಾರ್ಯದರ್ಶಿ ಮೊಹಮ್ಮದ್ ಸಲೀಂ ಬ್ಯಾಲಿಗಂಜ್‌ನಲ್ಲಿ ರೋಡ್ ಶೋ ನಡೆಸಿದರು. ಪೊನ್ನಾಗರ್‌ನಿಂದ ಉತ್ತರಾಪರವರೆಗೆ ಮೆರವಣಿಗೆ ನಡೆಸಿ ಮತಯಾಚಿಸಿದರು.

ಎಂ.ಎ.ಬೇಬಿ ಮತ್ತು ಬೃಂದಾಕಾರಟ್ ಸೇರಿದಂತೆ ಹಿರಿಯ ಧುರೀಣರು ಜಾಧವ್‌ಪುರದಲ್ಲಿ ರ್ಯಾಲಿಯಲ್ಲಿ ಪಾಲ್ಗೊಂಡರು. ಕಾಂಗ್ರೆಸ್, ಐಎಸ್‌ಎಫ್ ಹಾಗೂ ಇತರ ಪಕ್ಷಗಳ ಧುರೀಣರು ಕೂಡ ಎರಡನೇ ಹಂತದಲ್ಲಿ ಮತದಾನ ನಡೆಯಲಿರುವ ಕ್ಷೇತ್ರಗಳಲ್ಲಿ ಮತಯಾಚನೆ ಮುಂದುವರೆಸಿದ್ದಾರೆ.

********

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಗಳಿಗೆ ಚುನಾವಣಾ ಆಯೋಗ, ನಿನ್ನೆ ನಡೆದ ಚುನಾವಣೆ ನಂತರ ನೂತನ ಮಾರ್ಗಸೂಚಿಗಳನ್ನು ಹೊರಡಿಸಿದೆ. ಮತದಾನ ಮುಗಿದ ನಂತರ ಕಣ್ಗಾವಲು ಕ್ಯಾಮೆರಾಗಳು ಮತ್ತು ವೀಡಿಯೊ ಡೇಟಾವನ್ನು ನಿರ್ವಹಿಸಲು ಚುನಾವಣಾ ಆಯೋಗ ಕಟ್ಟುನಿಟ್ಟಿನ ಪ್ರೋಟೋಕಾಲ್‌ಗಳನ್ನು ನಿಗದಿಪಡಿಸಿದೆ. ಹೊಸ ಮಾರ್ಗಸೂಚಿಗಳ ಪ್ರಕಾರ, ಮತದಾನ ಮುಗಿದ ತಕ್ಷಣ ಮತಗಟ್ಟೆ ಕ್ಯಾಮೆರಾಗಳಲ್ಲಿ ಬಳಸಲಾದ Sಆ ಕಾರ್ಡ್‌ಗಳನ್ನು ತೆಗೆಯಲಾಗುವುದಿಲ್ಲ. ಸಹಾಯಕ ಚುನಾವಣಾಧಿಕಾರಿಯ ಸಮ್ಮುಖದಲ್ಲಿ ಗೊತ್ತುಪಡಿಸಿದ ದತ್ತಾಂಶ ಸಂಗ್ರಹಣೆ ಮತ್ತು ಸ್ವೀಕಾರ ಕೇಂದ್ರದಲ್ಲಿ ಮಾತ್ರ ಅವುಗಳನ್ನು ತೆಗೆಯಬಹುದು. ಮತದಾನದ ಸಮಯದಲ್ಲಿ ಸೆರೆಹಿಡಿಯಲಾದ ಎಲ್ಲಾ ವೀಡಿಯೊ ದೃಶ್ಯಗಳನ್ನು ಸುರಕ್ಷಿತವಾಗಿ ಮತ್ತು ವ್ಯವಸ್ಥಿತವಾಗಿ ಸಂರಕ್ಷಿಸಬೇಕು. ಕ್ಯಾಮೆರಾ ಉಪಕರಣಗಳನ್ನು ಸಂಪೂರ್ಣವಾಗಿ ಕೆಳಗಿಳಿಸುವವರೆಗೆ ಯಾವುದೇ ಮತಗಟ್ಟೆ ಸದಸ್ಯರು ಅಥವಾ ಬೂತ್ ಮಟ್ಟದ ಅಧಿಕಾರಿ ಮತಗಟ್ಟೆಯಿಂದ ಹೊರಹೋಗುವಂತಿಲ್ಲ ಎಂದು ಆಯೋಗ ಮಾರ್ಗಸೂಚಿಯಲ್ಲಿ ತಿಳಿಸಿದೆ.

********

ಪಂಚಾಯತಿ ರಾಜ್ ಸಚಿವಾಲಯವು ಇಂದು ರಾಷ್ಟ್ರೀಯ ಪಂಚಾಯತ್ ರಾಜ್ ದಿನವನ್ನು ಆಚರಿಸಲಿದೆ. ದೇಶಾದ್ಯಂತ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಸಾಂವಿಧಾನಿಕ ಸ್ಥಾನಮಾನ ಮತ್ತು ಕಾನೂನು ಮಾನ್ಯತೆ ನೀಡಿದ ೭೩ನೇ ಸಾಂವಿಧಾನಿಕ ತಿದ್ದುಪಡಿ ಕಾಯ್ದೆ ಜಾರಿಗೆ ಬಂದ ದಿನದ ಸ್ಮರಣಾರ್ಥವಾಗಿ ಈ ದಿನವನ್ನು ಆಚರಿಸಲಾಗುತ್ತದೆ. ಪ್ರಮುಖ ಕಾರ್ಯಕ್ರಮವು ನವದೆಹಲಿಯಲ್ಲಿ ನಡೆಯಲಿದೆ. ರಾಷ್ಟ್ರೀಯ ಕಾರ್ಯಕ್ರಮದ ಪ್ರಮುಖ ಅಂಶವಾಗಿ, ಪ್ರಧಾನಿ ನರೇಂದ್ರ ಮೋದಿಯವರ ಸಂದೇಶವನ್ನು ಸಮಾರಂಭದಲ್ಲಿ ಸಾದರ ಪಡಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. ದೇಶಾದ್ಯಂತ ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳು ಮತ್ತು ಕಾರ್ಯಕರ್ತರಿಗೆ ಪ್ರಧಾನ ಮಂತ್ರಿಯವರ ಸಂದೇಶವನ್ನು ಪ್ರಸಾರ ಮಾಡಲಾಗುವುದು ಎಂದು ಸಚಿವಾಲಯ ತಿಳಿಸಿದೆ.

********

ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಉತ್ತರ ಪ್ರದೇಶದ ಲಖನೌನಲ್ಲಿಂದು ಕೃಷಿ ಸಮ್ಮೇಳನವನ್ನು ಆಯೋಜಿಸಲಿದೆ. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಕೃಷಿಗೆ ಸಂಬಂಧಿಸಿದಂತೆ ನೂತನ ಆಲೋಚನೆಗಳು, ಹೊಸ ತಂತ್ರಜ್ಞಾನಗಳು ಮತ್ತು ಮಾರುಕಟ್ಟೆಗಳೊಂದಿಗೆ ಸಂಪರ್ಕಿಸುವ ವೇದಿಕೆಯನ್ನು ಒದಗಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ. ನಕಲಿ ಕೀಟನಾಶಕಗಳು ಮತ್ತು ರಸಗೊಬ್ಬರಗಳನ್ನು ನಿಯಂತ್ರಿಸುವುದು, ರಸಗೊಬ್ಬರವನ್ನು ಕಾಳಸಂತೆಯಲ್ಲಿ ಮಾರಾಟ ಮಾಡುವುದನ್ನು ತಡೆಗಟ್ಟುವುದು, ವಿತರಣಾ ವ್ಯವಸ್ಥೆಗಳನ್ನು ಸುಧಾರಿಸುವುದು ಮತ್ತು ಸಮತೋಲಿತ ಬಳಕೆಯನ್ನು ಪ್ರೋತ್ಸಾಹಿಸುವಂತಹ ನಿರ್ಣಾಯಕ ವಿಷಯಗಳನ್ನು ಸಮ್ಮೇಳನದಲ್ಲಿ ಚರ್ಚಿಸಲಾಗುವುದು.

********

ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಭಾರತೀಯ ನಾಗರಿಕರು ಯಾವುದೇ ಮಾರ್ಗಗಳ ಮೂಲಕ ಇರಾನ್‌ಗೆ ಪ್ರಯಾಣಿಸದಂತೆ ಸಲಹೆ ನೀಡಿದೆ. ಪ್ರಾದೇಶಿಕ ಉದ್ವಿಗ್ನತೆಯಿಂದಾಗಿ ವಾಯುಪ್ರದೇಶದ ನಿರ್ಬಂಧಗಳು ಮತ್ತು ಕಾರ್ಯಾಚರಣೆಯ ಅನಿಶ್ಚಿತತೆಗಳು ಇರಾನ್‌ಗೆ ಮತ್ತು ಅಲ್ಲಿಂದ ಹೊರಡುವ ಅಂತಾರಾಷ್ಟ್ರೀಯ ವಿಮಾನ ಕಾರ್ಯಾಚರಣೆಗಳ ಮೇಲೆ ಪರಿಣಾಮ ಬೀರುತ್ತಿವೆ ಎಂದು ರಾಯಭಾರ ಕಚೇರಿಯು ಸಲಹೆಯಲ್ಲಿ ತಿಳಿಸಿದೆ. ಪ್ರಸ್ತುತ ಇರಾನ್‌ನಲ್ಲಿರುವ ಎಲ್ಲಾ ಭಾರತೀಯ ಪ್ರಜೆಗಳು ರಾಯಭಾರ ಕಚೇರಿಯೊಂದಿಗೆ ಕಟ್ಟುನಿಟ್ಟಾಗಿ ಸಮನ್ವಯದೊಂದಿಗೆ ಗೊತ್ತುಪಡಿಸಿದ ಭೂ ಗಡಿ ಮಾರ್ಗಗಳ ಮೂಲಕ ದೇಶವನ್ನು ತೊರೆಯಬೇಕು ಎಂದು ಅದು ಪುನರುಚ್ಚರಿಸಿದೆ.

********

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್ ವಿರುದ್ಧದ ಯುದ್ಧದಲ್ಲಿ ಪರಮಾಣು ಅಸ್ತ್ರವನ್ನು ಬಳಸುವುದನ್ನು ತಳ್ಳಿಹಾಕಿದ್ದಾರೆ, ಇಸ್ಲಾಮಿಕ್ ಗಣರಾಜ್ಯದೊಂದಿಗೆ ಅತ್ಯುತ್ತಮ ಶಾಂತಿ ಒಪ್ಪಂದವನ್ನು ಮಾಡಿಕೊಳ್ಳುವ ಆಶಯವನ್ನು ಹೊಂದಿದ್ದಾರೆ. ಪರಮಾಣು ಅಸ್ತ್ರಗಳನ್ನು ಬಳಸಲು ಯಾರಿಗೂ ಅವಕಾಶ ನೀಡಬಾರದು ಎಂದು ಹೇಳಿದ್ದಾರೆ. ಟೆಹ್ರಾನ್ ಏಕೀಕೃತ ಪ್ರಸ್ತಾವನೆಯನ್ನು ಸಲ್ಲಿಸುವವರೆಗೆ ಇರಾನ್ ಜೊತೆಗಿನ ಕದನ ವಿರಾಮವನ್ನು ವಿಸ್ತರಿಸುವುದಾಗಿ ಘೋಷಿಸಿದ ಎರಡು ದಿನಗಳ ನಂತರ, ಶ್ವೇತಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಟ್ರಂಪ್ ಈ ಹೇಳಿಕೆಗಳನ್ನು ನೀಡಿದ್ದಾರೆ. ಈ ನಡುವೆ, ಇಸ್ರೇಲ್ ಮತ್ತು ಲೆಬನಾನ್ ನಡುವಿನ ಕದನ ವಿರಾಮವನ್ನು ಮೂರು ವಾರಗಳವರೆಗೆ ವಿಸ್ತರಿಸಲಾಗುವುದು ಎಂದು ಟ್ರಂಪ್ ಘೋಷಿಸಿದ್ದಾರೆ. ಇದು ಮಧ್ಯಪ್ರಾಚ್ಯ ಸಂಘರ್ಷದಲ್ಲಿ ಉಲ್ಬಣವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಸಕಾರಾತ್ಮಕ ಕ್ರಮವಾಗಿದೆ.

********

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇದೇ ಭಾನುವಾರ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೩ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

********

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರಗಳ ಸಚಿವ ಜೆ.ಪಿ. ನಡ್ಡಾ ಅವರು ನವದೆಹಲಿಯಲ್ಲಿ ಕೈಗಾರಿಕಾ ನಾಯಕರೊಂದಿಗೆ ಸಭೆ ನಡೆಸಿ, ರಾಸಾಯನಿಕ ಮತ್ತು ಪೆಟ್ರೋಕೆಮಿಕಲ್ ವಲಯಕ್ಕೆ ಕಾರ್ಯತಂತ್ರದ ಮಾರ್ಗಸೂಚಿಯನ್ನು ರೂಪಿಸುವ ಬಗ್ಗೆ ಚರ್ಚಿಸಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ೨೦೪೭ರ ವೇಳೆಗೆ ಈ ವಲಯದ ಬೆಳವಣಿಗೆಯನ್ನು ವೇಗಗೊಳಿಸಲು ಮತ್ತು ವಿಕಸಿತ ಭಾರತದ ದೃಷ್ಟಿಕೋನಕ್ಕೆ ಕೊಡುಗೆ ನೀಡಲು ಅಲ್ಪಾವಧಿ ಮತ್ತು ದೀರ್ಘಾವಧಿಯ ಕ್ರಮಗಳನ್ನು ರೂಪಿಸುವ ಬಗ್ಗೆ ಚರ್ಚೆಗಳು ಕೇಂದ್ರೀಕರಿಸಿವೆ ಎಂದು ಹೇಳಿದರು. ಸಭೆಯಲ್ಲಿ ರಾಸಾಯನಿಕ ಮತ್ತು ರಸಗೊಬ್ಬರಗಳ ಸಚಿವಾಲಯವು ಪಶ್ಚಿಮ ಏಷ್ಯಾದ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ವಲಯ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸುವ ಮತ್ತು ಪರ್ಯಾಯ ಪೂರೈಕೆ ಸರಪಳಿಗಳನ್ನು ಅಭಿವೃದ್ಧಿಪಡಿಸುವ ಬಗ್ಗೆಯೂ ಚರ್ಚಿಸಿತು. ಸಂವಾದದ ಸಮಯದಲ್ಲಿ, ಜಾಗತಿಕ ರಾಸಾಯನಿಕ ಮತ್ತು ಪೆಟ್ರೋಕೆಮಿಕಲ್ ಮೌಲ್ಯ ಸರಪಳಿಯಲ್ಲಿ ಭಾರತದ ಸ್ಥಾನವನ್ನು ಬಲಪಡಿಸುವ ತಂತ್ರಗಳನ್ನು ಸಚಿವರು ಪ್ರಸ್ತಾಪಿಸಿದರು ಹಾಗೂ ಉದ್ಯಮದ ಸಾಮರ್ಥ್ಯದ ಬಗ್ಗೆ ವಿಶ್ವಾಸ ವ್ಯಕ್ತಪಡಿಸಿದರು.

********

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡವು ಮುಂಬೈ ಇಂಡಿಯನ್ಸ್ ತಂಡದ ವಿರುದ್ಧ ೧೦೩ ರನ್‌ಗಳಿಂದ ಭರ್ಜರಿ ಜಯ ಸಾಧಿಸಿದೆ. ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟಾನ್ಸ್ ತಂಡ ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

****END****